# INDEPENDENCE DAY 2026



ಸ್ವಾತಂತ್ರ್ಯ ದಿನಾಚರಣೆ ಒಂದು ದಿನದ ಆಚರಣೆಗೆ ಸೀಮಿತವಾಗಿರದೆ ಪ್ರತಿ ದಿನ ಪ್ರತಿ ಕ್ಷಣವೂ ದೇಶದ ಪ್ರಜೆಗಳಾದ ನಮ್ಮಲ್ಲಿ ಜಾಗೃತವಾಗಿರಬೇಕು ಆಗ ಮಾತ್ರ ಸಾರ್ವಜನಿಕ ಶಿಸ್ತನ್ನು ತೋರಲು ಸಾಧ್ಯವಾಗುತ್ತದೆ ಎಂದು ನಿವೃತ್ತ ಭಾರತೀಯ ವಿದೇಶಾಂಗ ಸೇವಾ ಅಧಿಕಾರಿ ಟಿ.ಎನ್.ಅನಂತಕೃಷ್ಣ ಅಭಿಪ್ರಾಯ ಪಟ್ಟರು.

ನಗರದ ಶೇಷಾದ್ರಿ ಅಯ್ಯರ್ ರಸ್ತೆಯಲ್ಲಿರುವ ವಿದ್ಯಾವರ್ಧಕ ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ ಆಯೋಜಿಸಿದ್ದ 80ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಧ್ವಜಾರೋಹಣ ನೆರವೇರಿಸಿ ಮಾತನಾಡುತ್ತಿದ್ದ ಅವರು ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹನೀಯರಾದ ಮಹಾತ್ಮ ಗಾಂಧೀಜಿ ಸುಭಾಷ್ ಚಂದ್ರಬೋಸ್ ಡಾ.ಬಿ.ಆರ್ ಅಂಬೇಡ್ಕರ್ ಅವರ ಶ್ರಮವನ್ನು ನೆನೆಯುತ್ತಾ ಸ್ವಾತಂತ್ರ್ಯ ಎನ್ನುವುದು ದುರ್ಬಳಕೆಯಾಗಬಾರದು. ನಿಜವಾದ ಸ್ವಾತಂತ್ರ್ಯ ಎಂದರೇನು? ಎಂಬುದನ್ನು ಅರ್ಥ ಮಾಡಿಕೊಂಡಾಗ ಮಾತ್ರ ಯುವ ಜನತೆಯು ದೇಶದ ಏಳಿಗೆಗೆ ಶ್ರಮಿಸಲು ಸಹಕಾರಿಯಾಗುತ್ತದೆ. 2047ರ ಭಾರತ ಸ್ವಾತಂತ್ರ್ಯ ಶತಮಾನೋತ್ಸದ ವೇಳೆಗೆ ದೇಶವನ್ನು ಸಂಪೂರ್ಣವಾಗಿ ಅಭಿವೃದ್ಧಿಹೊಂದಿದ ರಾಷ್ಟ್ರವನ್ನಾಗಿ ರೂಪಿಸುವ ವಿಕಸಿತ ಭಾರತದ ಕನಸು ನನಸಾಗಲಿ ಎಂದು ಹಾರೈಸಿದರು. ಆರ್ಥಿಕ ಸಮೃದ್ಧಿ ಅತ್ಯಾಧುನಿಕ ಮೂಲಭೂತ ಸೌಕರ್ಯ, ಗುಣಮಟ್ಟದ ಶಿಕ್ಷಣ ಆರೋಗ್ಯ ಬಡತನರಹಿತ ಸಮಾಜ ಮತ್ತು ತಂತ್ರಜ್ಞಾನದಲ್ಲಿ ದೇಶ ಅಗ್ರಸ್ಥಾನಗಳಿಸುವಲ್ಲಿ ಕಾರ್ಯೋನ್ಮುಖವಾಗಿದೆ ಎಂದು ದೇಶದ ಪ್ರಗತಿಯನ್ನು ಶ್ಲಾಘಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಆಡಳಿತ ಮಂಡಳಿಯ ಸದಸ್ಯ ಶಿವಲಿಂಗಯ್ಯ ಮಾತನಾಡುತ್ತಾ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಹಿರಿಯರನ್ನು ನಾವು ನೆನೆಯಬೇಕು. ದೇಶಕ್ಕೆ ಸ್ವಾತಂತ್ರ್ಯ ಬಂದಾಗ ದೇಶದ ಜನರಿಗೆ ಆಹಾರ ಭದ್ರತೆ, ಸ್ವಾವಲಂಬನೆಯ ಕೊರತೆಯಿತ್ತು. ಇಂದಿನ ದಿನಮಾನದಲ್ಲಿ ಆ ಕೊರತೆಯನ್ನು ದೇಶ ನೀಗಿದೆ. ಇದಕ್ಕೆ ಕಾರಣ ಸ್ವಾತಂತ್ರ್ಯ ಭಾರತದ ಮೊದಲನೇ ತಲೆಮಾರು ತಮ್ಮ ಶಕ್ತಿಮೀರಿ ಶ್ರಮಿಸಿದ ಪೂರ್ವಜರನ್ನು ನೆನೆಯೋಣ ಎಂದು ತಿಳಿಸಿದ'ರು.

ಕಾರ್ಯಕ್ರಮದ ಅದ್ಯಕ್ಷತೆ ವಹಿಸಿದ್ದ ಸಂಸ್ಥೆಯ ಗೌ॥ಕೋಶಾಧ್ಯಕ್ಷ ಶ್ರೀಶೈಲರಾಮಣ್ಣವರ್ ತಮ್ಮ ಅಧ್ಯಕ್ಷೀಯ ನುಡಿಗಳಲ್ಲಿ ಸ್ವಾತಂತ್ರ್ಯ ದಿನಾಚರಣೆ ಒಂದು ರಾಜಕೀಯ ಘಟನೆಯಲ್ಲ, ಅದು ದೇಶದ ಜನರ ತ್ಯಾಗದ ಸಂಕೇತ. ನಮಗೆ ದಕ್ಕಿದ ಸ್ವಾತಂತ್ರ್ಯವನ್ನು ಮುಂದಿನ ಪೀಳಿಗೆಗೆ ದಾಟಿಸುವುದು ನಮ್ಮ ಕರ್ತವ್ಯ. ಭಾರತದ ನಿಜವಾದ ಶಕ್ತಿ ಅಡಗಿರುವುದು ನಮ್ಮ ಜ್ಞಾನದಲ್ಲಿ, ಎಲ್ಲರೂ ಜ್ಞಾನಿಗಳಾಗೋಣ ಎಂದು ಕರೆನೀಡಿದರು.

ಕು. ದೀಕ್ಷಾ ಮತ್ತು ತಂಡದವರ ಪ್ರಾರ್ಥನೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮವನ್ನು ಸೌಮ್ಯ.ಎಂ ಸ್ವಾಗತಿಸಿದರು. ಪ್ರಾಂಶುಪಾಲರುಗಳಾದ ಡಾ.ಎಸ್.ಮರೀಗೌಡ, ಡಾ.ಪಿ.ದೀಪು, ಶ್ರೀನಿವಾಸ ಹಾಗೂ ಸುರೇಶ್.ಕೆ.ಎಂ, ಅಧ್ಯಾಪಕರು, ಅಧ್ಯಾಪಕೇತರರು, ಸ್ಕೌಟ್ಸ್ ಅಂಡ್ ಗೈಡ್ಸ್ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದ ಕಾರ್ಯಕ್ರಮದಲ್ಲಿ ಎನ್.ಸಿ.ಸಿ ಕೆಡೆಟ್‌ಗಳು ಆಕರ್ಷಕ ಪಥಸಂಚಲವನ್ನು ನೆರವೇರಿಸಿದರು. ಪ್ರೌಢಶಾಲಾ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡಿದ ಕಾರ್ಯಕ್ರಮವನ್ನು ಪಲ್ಲವಿ.ಡಿ ನಿರೂಪಿಸಿ, ಮಹೇಶ್.ಡಿ ವಂದಿಸಿದರು.









































Mysuru






Sangha (R) Mysuru






ರಂಗ ಮಂಟಪ


ರಂಗ ಮಂಟಪ